## ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 690
ಸದಸ್ಯರ ಹೆಸರು : ಶ್ರೀ ಬಿ.ಕೆ.ಹರಿಪ್ರಸಾದ್
ಉತ್ತರಿಸುವ ದಿನಾಂಕ : 17-09-2021
ಉತ್ತರಿಸುವ ಸಚಿವರು : ಸಮಾಜ ಕಲ್ಯಾಣ ಮತ್ತು ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು.

| ಕ್ರ.ಸಂ. | ಪ್ರಶ್ನೆ | ಉತ್ತರ |
|---|---|---|
| (ಅ) | ಸಮಾಜ ಕಲ್ಯಾಣ ಇಲಾಖೆಯ ಅಧೀನದಲ್ಲಿರುವ ವಿದ್ಯಾರ್ಥಿನಿಲಯಗಳ ಸಂಖ್ಯೆ ಎಷ್ಟು; | ಮೆಟ್ರಿಕ್ ಪೂರ್ವ ವಿದ್ಯಾರ್ಥಿನಿಲಯಗಳು - 1233<br>ಮೆಟ್ರಿಕ್ ನಂತರದ ವಿದ್ಯಾರ್ಥಿನಿಲಯಗಳು - 634<br>ಒಟ್ಟು - 1867 |
| (ಆ) | ಎಷ್ಟು ಜನ ಬಡ ವಿದ್ಯಾರ್ಥಿ ಮತ್ತು ವಿದ್ಯಾರ್ಥಿನಿಯರುಗಳು ವಿದ್ಯಾರ್ಥಿ ನಿಲಯಗಳಲ್ಲಿ ವಾಸವಾಗಿದ್ದಾರೆ; | 2020-21ನೇ ಸಾಲಿನಲ್ಲಿ ಈ ಕೆಳಕಂಡಂತೆ ವಿದ್ಯಾರ್ಥಿ ಮತ್ತು ವಿದ್ಯಾರ್ಥಿನಿಯರಿಗೆ ಪ್ರವೇಶಾವಕಾಶ ಕಲ್ಪಿಸಲಾಗಿದೆ.<br>(ಕೆಳಗಿನ ಕೋಷ್ಟಕ)<br>2021-22ನೇ ಸಾಲಿನಲ್ಲಿ ಪ್ರವೇಶ ಪ್ರಕ್ರಿಯೆ ಜಾರಿಯಲ್ಲಿದೆ. |
| (ಇ) | ಇವರಿಗೆ ಕೊಡಮಾಡುತ್ತಿರುವ ಸೌಲಭ್ಯಗಳೇನು; | ವಿದ್ಯಾರ್ಥಿನಿಲಯಗಳಲ್ಲಿ ನೀಡಲಾಗುತ್ತಿರುವ ಸೌಲಭ್ಯಗಳನ್ನು ಅನುಬಂಧ-1ರಲ್ಲಿ ನೀಡಲಾಗಿದೆ. |
| (ಈ) | ಎಷ್ಟು ವಿದ್ಯಾರ್ಥಿನಿಲಯದ ವಿದ್ಯಾರ್ಥಿಗಳು ಉನ್ನತ ಶಿಕ್ಷಣ ಸಲುವಾಗಿ ಹೊರದೇಶಗಳಿಗೆ ಹೋಗಿ ಬಂದಿದ್ದಾರೆ? | ಸಮಾಜ ಕಲ್ಯಾಣ ಇಲಾಖೆಯಿಂದ ಪ್ರಬುದ್ಧ ಯೋಜನೆಯಡಿ ಅರ್ಹ ಪರಿಶಿಷ್ಟ ಜಾತಿ ವಿದ್ಯಾರ್ಥಿಗಳನ್ನು ವಿದೇಶಿ ವ್ಯಾಸಂಗಕ್ಕಾಗಿ ಆಯ್ಕೆ ಮಾಡಿ ಕಾಲೇಜು ಶುಲ್ಕ & ನಿರ್ವಹಣೆ ವೆಚ್ಚ ಪಾವತಿಸಲಾಗುತ್ತಿದ್ದು, 2021-22ನೇ ಸಾಲಿನ ಹೊಸ ಮಾರ್ಗಸೂಚಿಯನ್ವಯ ವಿದ್ಯಾರ್ಥಿನಿಲಯದಲ್ಲಿ ವ್ಯಾಸಂಗ ಮಾಡಿದ ವಿದ್ಯಾರ್ಥಿಗಳಿಗೆ ಶೇ 10% ಹಾಗೂ ಮೊರಾರ್ಜಿ ದೇಸಾಯಿ ವಸತಿ ಶಾಲೆಗಳಲ್ಲಿ ವ್ಯಾಸಂಗ ಮಾಡಿದ ವಿದ್ಯಾರ್ಥಿಗಳಿಗೆ ಶೇ 10% ರಷ್ಟು ಸೀಟುಗಳನ್ನು ಕಾಯ್ದಿರಿಸಿಕೊಳ್ಳಲಾಗಿದೆ. |

| ಕ್ರ.ಸಂ. | ನಿಲಯವಾರು ವಿವರ | ಪ್ರವೇಶ ಪಡೆದ ವಿದ್ಯಾರ್ಥಿಗಳ ಸಂಖ್ಯೆ | | |
|---|---|---|---|---|
| | | ಬಾಲಕ | ಬಾಲಕಿಯರು | ಒಟ್ಟು |
| 1 | ಮೆಟ್ರಿಕ್ ಪೂರ್ವ ವಿದ್ಯಾರ್ಥಿನಿಲಯಗಳು | 42,906 | 14,176 | 57,082 |
| 2 | ಮೆಟ್ರಿಕ್ ನಂತರದ ವಿದ್ಯಾರ್ಥಿನಿಲಯಗಳು | 40,273 | 25,651 | 65,924 |
| ಒಟ್ಟು | | 83,179 | 39,827 | 1,23,006 |

ಸಕಇ 309 ಪಕವಿ 2021

(ಕೋಟ ಶ್ರೀನಿವಾಸ ಪೂಜಾರಿ)
ಸಮಾಜ ಕಲ್ಯಾಣ ಮತ್ತು ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು.

**ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ:690 ಕ್ಕೆ ಅನುಬಂಧ-1**

**ಸಮಾಜ ಕಲ್ಯಾಣ ಇಲಾಖೆಯ ಮೆಟ್ರಿಕ್ ಪೂರ್ವ ಹಾಗೂ ಮೆಟ್ರಿಕ್ ನಂತರದ ವಿದ್ಯಾರ್ಥಿನಿಲಯದ ವಿದ್ಯಾರ್ಥಿಗಳಿಗೆ ನೀಡಲಾಗುತ್ತಿರುವ ವಿವಿಧ ಸೌಲಭ್ಯಗಳ ವಿವರ.**

*****

<table>
<tr><th>ಮೆಟ್ರಿಕ್ ಪೂರ್ವ ವಿದ್ಯಾರ್ಥಿನಿಲಯಗಳು</th><th>ಮೆಟ್ರಿಕ್ ನಂತರದ ವಿದ್ಯಾರ್ಥಿನಿಲಯಗಳು</th></tr>
<tr><td>• ಮಾಹೆಯಾನ ರೂ.1500.00/-ರ ವೆಚ್ಚದಲ್ಲಿ ಭೋಜನ.<br>• ಮಾಹೆಯಾನ ರೂ.73.00ರ ವೆಚ್ಚದಲ್ಲಿ ಬಾಲಕರಿಗೆ ಮೈಸೂರು ಸ್ಯಾಂಡಲ್ ಸೋಪ್, ಮೈಸೂರು ಡಿಟರ್ಜೆಂಟ್ ಕೇಕ್. ಕೊಬ್ಬರಿ ಎಣ್ಣೆ, ಟೂತ್ ಪೇಸ್ಟ್ ಮತ್ತು ಟೂತ್ ಬ್ರಷ್.<br>• ಮಾಹೆಯಾನ ರೂ.105.00ರ ವೆಚ್ಚದಲ್ಲಿ ಬಾಲಕಿಯರಿಗೆ ಈ ಮೇಲಿನ ಸಾಮಾಗ್ರಿಗಳ ಜೊತೆಗೆ ಹೆಚ್ಚುವರಿಯಾಗಿ ಟಾಲ್ಕಂ ಪೌಡರ್‌ನ್ನು ನೀಡಲಾಗುವುದು.<br>• ವಾರ್ಷಿಕ ರೂ.550.00 ರಿಂದ 1060.00ರ ವೆಚ್ಚದಲ್ಲಿ 02 ಜೊತೆ ಸಮವಸ್ತ್ರಗಳು.<br>• ವಾರ್ಷಿಕ ರೂ.300.00ರ ವೆಚ್ಚದಲ್ಲಿ 01 ಜೊತೆ ಶೂ ಮತ್ತು ಸಾಕ್ಸ್.<br>• ವಾರ್ಷಿಕ ರೂ.400.00ರ ವೆಚ್ಚದಲ್ಲಿ ಪಠ್ಯ ಪುಸ್ತಕ ಮತ್ತು ಲೇಖನ ಸಾಮಾಗ್ರಿ.<br>• ವಾರ್ಷಿಕ ರೂ.150.00 ರ ವೆಚ್ಚದಲ್ಲಿ ಬಾಲಕರಿಗೆ ಕ್ಷೌರದ ವೆಚ್ಚ.<br>• ಮೂರು ವರ್ಷಕ್ಕೊಮ್ಮೆ ರೂ.800.00 ವೆಚ್ಚದಲ್ಲಿ ಹಾಸಿಗೆ,ಹೊದಿಕೆ.<br>• ಪ್ರತಿ ನಿಲಯಕ್ಕೆ ವಾರ್ಷಿಕ ರೂ.3000.00 ವೆಚ್ಚದಲ್ಲಿ ದಿನ ಪತ್ರಿಕೆ/ವಾರ/ಮಾಸ ಪತ್ರಿಕೆಗಳ ವೆಚ್ಚ.<br>• 50 ವಿದ್ಯಾರ್ಥಿಗಳ ಸಂಖ್ಯೆಯ ಪ್ರತಿ ನಿಲಯಕ್ಕೆ ವಾರ್ಷಿಕ ರೂ.5000.00 ರ ವೆಚ್ಚದಲ್ಲಿ ಹಾಗೂ 100 ವಿದ್ಯಾರ್ಥಿಗಳ ಸಂಖ್ಯೆ ಮೀರಿದ ಪ್ರತಿ ನಿಲಯಕ್ಕೆ ವಾರ್ಷಿಕ ರೂ.8000.00ಗಳ ವೆಚ್ಚದಲ್ಲಿ ವೈದ್ಯಕೀಯ ಸೌಲಭ್ಯ.<br>• ವರ್ಷದಲ್ಲಿ 6 ತಿಂಗಳು ವಿಜ್ಞಾನ, ಗಣಿತ, ಇಂಗ್ಲೀಷ್ ಮತ್ತು ಇತರೆ ಸಾಮಾನ್ಯ ವಿಷಯಗಳಲ್ಲಿ 03 ಅರೆ ಕಾಲಿಕ ಬೋಧಕರಿಂದ ವಿಶೇಷ ಬೋಧನೆ.(ವಾರ್ಷಿಕ ವೆಚ್ಚ ರೂ.18,000/-)<br>• ಪ್ರತಿ ನಿಲಯಕ್ಕೆ ಎರಡು ವರ್ಷಕ್ಕೊಮ್ಮೆ ರೂ.20,000.00ಗಳ ಮಿತಿಯೊಳಗೆ ಕ್ರೀಡಾ ಸಾಮಾಗ್ರಿಗಳನ್ನು ಒದಗಿಸಲಾಗುವುದು.</td><td>• ಮಾಹೆಯಾನ ರೂ.1600.00/-ರ ವೆಚ್ಚದಲ್ಲಿ ಭೋಜನ.<br>• ಮೂರು ವರ್ಷಕ್ಕೊಮ್ಮೆ ರೂ.1000.00 ವೆಚ್ಚದಲ್ಲಿ ಹಾಸಿಗೆ,ಹೊದಿಕೆ.<br>• ಪ್ರತಿ ನಿಲಯಕ್ಕೆ ವಾರ್ಷಿಕ ರೂ.3500.00 ವೆಚ್ಚದಲ್ಲಿ ದಿನ ಪತ್ರಿಕೆ/ವಾರ/ಮಾಸ ಪತ್ರಿಕೆಗಳ ವೆಚ್ಚ.<br>• ಮಾಹೆಯಾನ ರೂ.73.00ರ ವೆಚ್ಚದಲ್ಲಿ ಬಾಲಕರಿಗೆ ಮೈಸೂರು ಸ್ಯಾಂಡಲ್ ಸೋಪ್, ಮೈಸೂರು ಡಿಟರ್ಜೆಂಟ್ ಕೇಕ್, ಕೊಬ್ಬರಿ ಎಣ್ಣೆ, ಟೂತ್ ಪೇಸ್ಟ್ ಮತ್ತು ಟೂತ್ ಬ್ರಷ್.<br>• ಮಾಹೆಯಾನ ರೂ.105.00ರ ವೆಚ್ಚದಲ್ಲಿ ಬಾಲಕಿಯರಿಗೆ ಈ ಮೇಲಿನ ಸಾಮಾಗ್ರಿಗಳ ಜೊತೆಗೆ ಹೆಚ್ಚುವರಿಯಾಗಿ ಟಾಲ್ಕಂ ಪೌಡರ್‌ನ್ನು ನೀಡಲಾಗುವುದು.<br>• ಪ್ರತಿ ನಿಲಯಕ್ಕೆ ಎರಡು ವರ್ಷಕ್ಕೊಮ್ಮೆ ರೂ.20,000.00ಗಳ ಮಿತಿಯೊಳಗೆ ಕ್ರೀಡಾ ಸಾಮಾಗ್ರಿಗಳನ್ನು ಒದಗಿಸಲಾಗುವುದು</td></tr>
</table>